**All India Radio: Bangalore**
**Regional Bulletin In Kannada**
**11.04.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.04.2026 / 2.30 p.m.**

**<><><><>**

ಮುಖ್ಯಾಂಶಗಳು

1. ಮಹಿಳೆಯರಿಗೆ ಶೇಕಡ ೩೩ ರಷ್ಟು ಮೀಸಲಾತಿ ಕುರಿತು ವಿಶೇಷ ಸಂಸತ್ ಅಧಿವೇಶನದಲ್ಲಿ ಚರ್ಚೆ- ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ
2. ಇಂದು ಸಮಾಜ ಸುಧಾರಕ, ಮಹಾತ್ಮ ಜ್ಯೋತಿಬಾ ಫುಲೆ ಜಯಂತಿ: ಗಣ್ಯರಿಂದ ಗೌರವ ನಮನ
3. ಇಎಸ್ಐ ಆಸ್ಪತ್ರೆಗಳೊಂದಿಗೆ ತಾಲೂಕು, ಜಿಲ್ಲಾ ಸರ್ಕಾರಿ ಆಸ್ಪತ್ರೆ ಜೋಡಿಸಿ ಚಿಕಿತ್ಸೆ ಒದಗಿಸಲು ಒಪ್ಪಂದ- ದಿನೇಶ್ ಗುಂಡೂರಾವ್
4. ಮೈಸೂರು-ದಿಬ್ರೂಗಢ ನಡುವೆ ಬೇಸಿಗೆ ವಿಶೇಷ ಎಕ್ಸ್‌ಪ್ರೆಸ್ ರೈಲು ಸಂಚಾರ

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡಿದೆ ಎಂದು ಕೇಂದ್ರ ಎಂಎಸ್ಎಂಇ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿ ಕುರಿತು ೧೬ರಿಂದ ಮೂರು ದಿನ ವಿಶೇಷ ಸಂಸತ್ ಅಧಿವೇಶನದಲ್ಲಿ ಚರ್ಚೆ ನಡೆಯಲಿದೆ ಎಂದರು. ನೀತಿ ನಿರೂಪಣೆಯಲ್ಲಿ ಮಹಿಳೆಯರು ಇರಬೇಕು ಎಂಬುದು ಪ್ರಧಾನಿ ನರೇಂದ್ರ ಮೋದಿ ಅವರ ಪರಿಕಲ್ಪನೆ. ಕೇಂದ್ರ ಸರ್ಕಾರದ ಬೇರೆ ಬೇರೆ ಯೋಜನೆಗಳಲ್ಲಿ ಮಹಿಳೆಯರಿಗೆ ಹೆಚ್ಚಿನ ಸಾಲ ನೀಡಲಾಗಿದೆ. ಪಕ್ಷದ ನಿರ್ಧಾರಿತ ವಲಯಗಳಲ್ಲಿ ಈಗಾಗಲೇ ಮಹಿಳೆಯರಿಗೆ ಪ್ರಾತಿನಿಧ್ಯ ನೀಡಲಾಗಿದೆ. ಕೋರ್‌ಕಮಿಟಿ, ಚುನಾವಣಾ ಸಮಿತಿ, ಪ್ರಾತಿನಿಧಿತ ವಲಯಗಳಲ್ಲೂ ಮಹಿಳಾ ಮೀಸಲಾತಿ ಜಾರಿಯಿದೆ ಎಂದರು.

<><><><>

ಇಂದು ಸಮಾಜ ಸುಧಾರಕ ಮಹಾತ್ಮ ಜ್ಯೋತಿಬಾ ಫುಲೆ ಅವರ ೨೦೦ನೇ ಜನ್ಮ ವಾರ್ಷಿಕೋತ್ಸವದಂದು ದೇಶವು ಅವರಿಗೆ ಗೌರವ ನಮನ ಸಲ್ಲಿಸುತ್ತಿದೆ. ೧೮೨೭ ರ ಈ ದಿನದಂದು ಜನಿಸಿದ ಮಹಾತ್ಮ ಜ್ಯೋತಿಬಾ ಫುಲೆ ಮತ್ತು ಅವರ ಪತ್ನಿ ಸಾವಿತ್ರಿ ಫುಲೆ ಅವರು ಜಾತಿ ವ್ಯವಸ್ಥೆ ಮತ್ತು ಅಸ್ಪೃಶ್ಯತೆಯನ್ನು ತೊಡೆದುಹಾಕಲು ಹೋರಾಡುವುದರ ಜೊತೆಗೆ ಮಹಿಳಾ ಶಿಕ್ಷಣ ಹಾಗೂ ಸಬಲೀಕರಣದ ಉದ್ದೇಶವನ್ನು ಪ್ರತಿಪಾದಿಸಿದ್ದರು. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಸಾಮಾಜಿಕ ಮಾಧ್ಯಮದಲ್ಲಿ ಮಹಾತ್ಮ ಜ್ಯೋತಿಬಾ ಫುಲೆ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಮಹಾತ್ಮ ಜ್ಯೋತಿಬಾ ಫುಲೆ ಅವರು ಸತ್ಯಶೋಧಕ ಸಮಾಜದ ಮೂಲಕ ಪ್ರಚುರಪಡಿಸಿದ ಮೌಢ್ಯ, ಕಂದಾಚಾರ ವಿರೋಧಿ ವೈಚಾರಿಕ ಚಿಂತನೆಗಳು ಜನರಲ್ಲಿ ನಿರಂತರ ಜಾಗೃತಿ ಮೂಡಿಸುತ್ತಾ, ಇಂದಿಗೂ ಸಮಾಜವನ್ನು ಪರಿವರ್ತನೆಯ ಹಾದಿಯಲ್ಲಿ ಮುನ್ನಡೆಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದ್ದಾರೆ.

<><><><>

ಇ.ಎಸ್.ಐ ಆಸ್ಪತ್ರೆಗಳೊಂದಿಗೆ ತಾಲೂಕು ಮತ್ತು ಜಿಲ್ಲಾ ಸರ್ಕಾರಿ ಆಸ್ಪತ್ರೆಗಳನ್ನು ಪರಸ್ಪರ ಜೋಡಿಸಿ ಚಿಕಿತ್ಸೆ ಒದಗಿಸುವ ಸಂಬಂಧ ಆರೋಗ್ಯ ಇಲಾಖೆ ಹಾಗೂ ಇ.ಎಸ್.ಐ ಇಲಾಖೆ ನಡುವೆ ಒಪ್ಪಂದ ಪ್ರಕ್ರಿಯೆ ನಡೆಯುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಿನ್ನೆ ಇ.ಎಸ್.ಐ. ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಈ ವಿಷಯ ತಿಳಿಸಿದ ಸಚಿವರು, ಇದರಿಂದ ಇ.ಎಸ್.ಐ.ಗೆ ಒಳಪಟ್ಟ ರೋಗಿಗಳು ತಾಲೂಕು ಮತ್ತು ಜಿಲ್ಲಾ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಹುದಾಗಿದೆ ಎಂದರು. ಹೆಚ್ಚಿನ ಸಂಖ್ಯೆಯ ಕಾರ್ಮಿಕರು ಮತ್ತು ಅವರ ಕುಟುಂಬಸ್ಥರು ಇ.ಎಸ್.ಐ ಚಿಕಿತ್ಸೆಯನ್ನು ಅವಲಂಬಿಸಿರುತ್ತಾರೆ. ಈ ನಿಟ್ಟಿನಲ್ಲಿ ಯಾವುದೇ ಕೊರತೆಯಾಗದಂತೆ ಉತ್ತಮ ಗುಣಮಟ್ಟದ ಚಿಕಿತ್ಸೆ ದೊರಕಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

<><><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ

ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯಲ್ಲಿ ಪ್ರಸ್ತುತ ಗ್ರಾಮೀಣ ಪ್ರದೇಶದಲ್ಲಿ ೫ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳು ನಡೆಯುತ್ತಿವೆ. ಈ ಕಾಮಗಾರಿ ಪೂರ್ಣಗೊಂಡರೆ ಜಿಲ್ಲೆಯ ಬಹುತೇಕ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಸಮಸ್ಯೆ ಪರಿಹಾರಗೊಳ್ಳಲಿದೆ ಎಂದರು. ಕೆಲವೆಡೆ ಅರಣ, ಭೂಮಿ ಸಮಸ್ಯೆ ಕಂಡುಬಂದಿದ್ದು, ಅರಣ್ಯ ಇಲಾಖೆಯೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಸಮಸ್ಯೆಗಳನ್ನು ಇತ್ಯರ್ಥಗೊಳಿಸಬೇಕು ಎಂದು ತಿಳಿಸಿದರು. ಮಹಾನಗರಪಾಲಿಕೆ ಆಯುಕ್ತ ರವಿಚಂದ್ರ ನಾಯಕ್ ಮಾತನಾಡಿ, ಮಂಗಳೂರು ನಗರಕ್ಕೆ ನೀರು ಪೂರೈಸುವ ತುಂಬೆ ಅಣೆಕಟ್ಟಿನಲ್ಲಿ ಪ್ರಸ್ತುತ ೫.೫ ಮೀಟರ್ ನೀರು ಲಭ್ಯವಿದೆ. ನಗರದಲ್ಲಿ ನೀರು ಸರಬರಾಜು ಉತ್ತಮ ಸ್ಥಿತಿಯಲ್ಲಿದೆ. ಎತ್ತರದ ಪ್ರದೇಶಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದರು.

<><><><>

ಭಾರತ ಜನಗಣತಿ-೨೦೨೭ರ ಪ್ರಕ್ರಿಯೆಯು ಅತ್ಯಂತ ಮಹತ್ವದ ರಾಷ್ಟ್ರೀಯ ಕಾರ್ಯವಾಗಿದ್ದು, ಗಣತಿದಾರರು ಮತ್ತು ಮೇಲ್ವಿಚಾರಕರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಚಿಕ್ಕಮಗಳೂರು ನಗರಸಭೆ ಪೌರಾಯುಕ್ತ ಬಸವರಾಜ್ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಜನಗಣತಿ ಕುರಿತು ಅಧಿಕಾರಿಗಳಿಗೆ ಆಯೋಜಿಸಿದ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜನಗಣತಿಯು ದೇಶದ ಭವಿಷ್ಯದ ಯೋಜನೆಗಳಿಗೆ ಅಡಿಪಾಯವಾಗಿದ್ದು, ಇದರಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ವಹಿಸಬಾರದು. ನಗರಸಭೆ ವತಿಯಿಂದ ಈಗಾಗಲೇ ವಾರ್ಡ್ ಮತ್ತು ಬ್ಲಾಕ್‌ವಾರು ನಕ್ಷೆಗಳನ್ನು ಸಿದ್ಧಪಡಿಸಲಾಗಿದೆ ಎಂದು ತಿಳಿಸಿದರು. ಪ್ರತಿಯೊಬ್ಬ ಗಣತಿದಾರರಿಗೂ ಅವರ ವ್ಯಾಪ್ತಿಯ ಸ್ಪಷ್ಟ ಮಾಹಿತಿ ನೀಡಲಾಗುವುದು. ಈ ಕಾರ್ಯಕ್ಕಾಗಿ ನಗರಸಭೆಯ ಆರ್.ಐ.ಗಳು, ಬಿಲ್ ಕಲೆಕ್ಟರ್‌ಗಳು ಹಾಗೂ ಸಂಬಂಧಪಟ್ಟ ಇಲಾಖಾ ಸಿಬ್ಬಂದಿಗಳು ಸಂಪೂರ್ಣ ಸಹಕಾರ ನೀಡಲಿದ್ದಾರೆ ಎಂದರು.

<><><><>

ಡಾ. ಮನ್‌ಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಜಾಗತಿಕ ಭಾಷೆಗಳ ಕೇಂದ್ರವು ರಷ್ಯನ್ ಹೌಸ್‌ನ ಸಹಯೋಗದಲ್ಲಿ "ರಷ್ಯನ್ ಗಗನಯಾತ್ರಿ ಜೊತೆ ಸಂವಾದ" ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿತ್ತು. ಈ ಕಾರ್ಯಕ್ರಮದಲ್ಲಿ ಪ್ರಸಿದ್ಧ ರಷ್ಯನ್

ಗಗನಯಾತ್ರಿ ಡೆನಿಸ್ ಮ್ಯಾಟ್‌ವೀವ್ ವಿಶೇಷ ಅತಿಥಿಯಾಗಿ ಭಾಗವಹಿಸಿದ್ದರು. ರಷ್ಯನ್ ಅಕಾಡೆಮಿ ಆಫ್ ಸೈನ್ಸಸ್‌ನ ಹೈಪೋಕೈನೆಟಿಕ್ ಇಂಪ್ಯಾಕ್ಟ್‌ನ ದೈಹಿಕ ಪರಿಣಾಮಗಳ ಪ್ರಯೋಗಾಲಯದ ಮುಖ್ಯಸ್ಥರಾದ ಅಲೆಕ್ಸೀ ಶ್ಪಾಕೋವ್ ಗೌರವ ಅತಿಥಿಯಾಗಿ ಉಪಸ್ಥಿತರಿದ್ದರು. ಕುಲಪತಿ ಪ್ರೊ. ರಮೇಶ್ .ಬಿ. ಮಾತನಾಡಿ ಕುತೂಹಲವೇ ಮಾನವ ಪ್ರಗತಿಗೆ ಪ್ರಮುಖ ಚಾಲಕಶಕ್ತಿ ಎಂದು ವಿವರಿಸಿದರು. ಅಂತರಿಕ್ಷದಿಂದ ಕಾಣುವ ಗಡಿಗಳಿಲ್ಲದ ವಿಶ್ವದ ದೃಶ್ಯವನ್ನು ಉಲ್ಲೇಖಿಸಿ, ಭೌಗೋಳಿಕ ಹಾಗೂ ಸಾಂಸ್ಕೃತಿಕ ಮಿತಿಗಳನ್ನು ಮೀರಿ ಚಿಂತಿಸುವಂತೆ ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು. ಕಾರ್ಯಕ್ರಮದ ಪ್ರಧಾನ ಆಕರ್ಷಣೆಯಾಗಿದ್ದ ಡೆನಿಸ್ ಮ್ಯಾಟ್ವೀವ್ ತಮ್ಮ ಅಂತರಿಕ್ಷಯಾನದ ಅನುಭವಗಳನ್ನು ಹಂಚಿಕೊಂಡರು. ಜಾಗತಿಕ ಭಾಷೆಗಳ ಕೇಂದ್ರದ ನಿರ್ದೇಶಕರಾದ ಡಾ. ಜ್ಯೋತಿ ವೆಂಕಟೇಶ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><><><>

ಬೇಸಿಗೆ ಸಮಯದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಗಮನದಲ್ಲಿಟ್ಟುಕೊಂಡು, ನೈರುತ್ಯ ರೈಲ್ವೆಯು ಮೈಸೂರು-ದಿಬ್ರೂಗಢ ನಡುವೆ ೨ ಟ್ರಿಪ್ ವಿಶೇಷ ಎಕ್ಸ್‌ಪ್ರೆಸ್ ರೈಲುಗಳ ವ್ಯವಸ್ಥೆ ಮಾಡಿದೆ. ೦೬೨೫೩ ಸಂಖ್ಯೆಯ ರೈಲು ಏಪ್ರಿಲ್ ೧೨ ಮತ್ತು ೨೬ ರಂದು ಬೆಳಗ್ಗೆ ೮ ಗಂಟೆಗೆ ಮೈಸೂರಿನಿಂದ ಹೊರಡಲಿದ್ದು, ಬುಧವಾರ ಬೆಳಗ್ಗೆ ೦೧:೩೦ಕ್ಕೆ ದಿಬ್ರೂಗಢ ತಲುಪಲಿದೆ. ೦೬೨೫೪ ಸಂಖ್ಯೆಯ ರೈಲು ಏಪ್ರಿಲ್ ೧೬ ಮತ್ತು ೩೦ ರಂದು ದಿಬ್ರೂಗಢದಿಂದ ಬೆಳಗ್ಗೆ ೦೧:೩೦ಕ್ಕೆ ಹೊರಟು, ಶನಿವಾರ ಮಧ್ಯಾಹ್ನ ೦೪:೧೫ಕ್ಕೆ ಮೈಸೂರಿಗೆ ಆಗಮಿಸಲಿದೆ. ಈ ರೈಲುಗಳು ಮಂಡ್ಯ, ಮದ್ದೂರು, ಕೆಂಗೇರಿ, ಕೆಎಸ್‌ಆರ್ ಬೆಂಗಳೂರು, ಕೃಷ್ಣರಾಜಪುರಂ, ಬಂಗಾರಪೇಟೆ, ಜೋಲಾರಪೇಟೆ, ಕಟ್ಪಾಡಿ, ರೇಣಿಗುಂಟಾ, ಗುಡೂರು, ನೆಲ್ಲೂರು, ಒಂಗೋಲ್, ವಿಜಯವಾಡ, ರಾಜಮಂಡ್ರಿ, ಕೊತ್ತವಲಸ, ವಿಜಯನಗರಂ ಮತ್ತಿತರ ನಿಲ್ದಾಣಗಳಲ್ಲಿ ಎರಡೂ ದಿಕ್ಕುಗಳಲ್ಲಿ ನಿಲುಗಡೆಯಾಗಲಿವೆ ಎಂದು ಪ್ರಕಟಣೆ ತಿಳಿಸಿದೆ.

<><><><>

ದಾವಣಗೆರೆಯ ದೃಶ್ಯಕಲಾ ಮಹಾವಿದ್ಯಾಲಯದ ಆವರಣದಲ್ಲಿ ಆಯೋಜಿಸಿರುವ ಏಳು ದಿನಗಳ ರಾಷ್ಟ್ರೀಯ ವೃತ್ತಿ ರಂಗೋತ್ಸವ ಹಾಗೂ ವಸ್ತು ಪ್ರದರ್ಶನವನ್ನು ಹಿರಿಯ ಸಂಸ್ಕೃತಿ ಚಿಂತಕ ನಾಡೋಜ ಪ್ರೊಫೆಸರ್ ಬರಗೂರು ರಾಮಚಂದ್ರಪ್ಪ ಉದ್ಘಾಟಿಸಿದರು. ಬಳಿಕ ಮಾತನಾಡಿದ

ಅವರು, ವೃತ್ತಿ ರಂಗಭೂಮಿಯು ಕೇವಲ ಆಧುನಿಕ ಕಂಪನಿ ನಾಟಕಗಳಿಗೆ ಸೀಮಿತವಾಗಿಲ್ಲ; ಅದರ ಮೂಲ ಪರಂಪರೆಯು ನಮ್ಮ ಬುಡಕಟ್ಟು ಸಂಸ್ಕೃತಿಯಲ್ಲಿದೆ ಎಂದು ಅಭಿಪ್ರಾಯಪಟ್ಟರು. ಹಗಲು ವೇಷದಾರಿಗಳು, ಬಹುರೂಪಿಗಳು ಹಾಗೂ ಬುಡ್ಗ ಜಂಗಮರಂತಹ ಕಲಾ ಪ್ರಕಾರಗಳು ಪ್ರಾಚೀನ ಕಾಲದಿಂದಲೂ ರಂಗಭೂಮಿಯನ್ನು ಜೀವಂತವಾಗಿರಿಸಿವೆ ಎಂದು ಹೇಳಿದರು. ಕಲೆ ಎಂಬುದು ಜಡವಾಗದೆ ಕಾಲಕ್ಕೆ ತಕ್ಕಂತೆ ಬದಲಾಗಬೇಕು. ಪೌರಾಣಿಕ ಮತ್ತು ಐತಿಹಾಸಿಕ ಪಾತ್ರಗಳು ವರ್ತಮಾನದ ಸ್ಥಿತಿಗತಿಗೆ ಅನುಗುಣವಾಗಿ ಮರು ವ್ಯಾಖ್ಯಾನಗೊಳ್ಳಬೇಕು. ಆಗ ಮಾತ್ರ ಕಲೆ ಬದುಕಿನ ಭಾಷೆಯಾಗಿ ಜನರ ಹೃದಯ ತಲುಪಲು ಸಾಧ್ಯ ಎಂದು ಅವರು ತಿಳಿಸಿದರು. ರಂಗಾಯಣದ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಐಜಿಪಿ ಡಾ. ಬಿ.ಆರ್. ರವಿಕಾಂತೇಗೌಡ ಅವರು 'ನೆನಪು' ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಿದರು. ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><>

ಕೋಲಾರದ ಕೆಜಿಎಫ್‌ನ ಭಾರತೀಯ ಮೀಸಲು ಬೆಟಾಲಿಯನ್ ಸ್ಥಾಪನೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ೧೧ ತಿಂಗಳೊಳಗೆ ಪೂರ್ಣಗೊಳಿಸಿ ಕಾರ್ಯಾರಂಭಕ್ಕೆ ಅನುವು ಮಾಡಿಕೊಡಬೇಕೆಂದು ವಸತಿ ಮಂಡಳಿ ಡಿಜಿಪಿ ಅರುಣ್ ಚಕ್ರವರ್ತಿ ಸೂಚಿಸಿದರು. ಐಆರ್ ಬಿ ಪಡೆಯ ಸ್ಥಾಪನೆ ಸಂಬಂಧ ಸ್ಥಳ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಕಚೇರಿ ಕಟ್ಟಡ, ವಸತಿ ನಿಲಯಗಳು ಸೇರಿದಂತೆ ವಿವಿಧ ಸೌಲಭ್ಯಗಳ ನಿರ್ಮಾಣ ಕಾರ್ಯ ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ನಿರ್ದೇಶನ ನೀಡಿದರು. ೧೦೦ ಎಕರೆ ಪ್ರದೇಶದಲ್ಲಿ ಈ ಬೆಟಾಲಿಯನ್ ಸ್ಥಾಪನೆಗೆ ಯೋಜನೆ ರೂಪಿಸಲಾಗಿದ್ದು, ಪರೇಡ್ ಮೈದಾನ, ವಸತಿ ಸೌಕರ್ಯ ಹಾಗೂ ಇತರೆ ಆಡಳಿತ ಕಟ್ಟಡಗಳ ನಿರ್ಮಾಣ ಆರಂಭಗೊಂಡಿದೆ ಎಂದರು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಶೇಕಡ ೫೦:೫೦ ಅನುಪಾತದ ಸಹಭಾಗಿತ್ವದಲ್ಲಿ ಯೋಜನೆ ಕೈಗೊಳ್ಳುತ್ತಿದ್ದು ಇಂಡಿಯನ್ ರಿಸರ್ವ್ ಬೆಟಾಲಿಯನ್ ರಾಜ್ಯ ಮಟ್ಟದ ವಿಶೇಷ ಸಶಸ್ತ್ರ ಪಡೆ ಆಗಿದ್ದು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ತಿಳಿಸಿದರು.

<><><>

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬೊಮ್ಮನಹಳ್ಳಿಯಲ್ಲಿ ನಾಲ್ಕರಿಂದ ಐದು ವರ್ಷದ ಚಿರತೆ ಕಳೇಬರ ಪತ್ತೆಯಾಗಿದೆ. ಈ ಕುರಿತು ಆಕಾಶವಾಣಿಯೊಂದಿಗೆ ಪ್ರತಿಕ್ರಿಯಿಸಿದ ಬಂಡೀಪುರ ಎಸಿಎಫ್ ನವೀನ್ ಕುಮಾರ್, ಮುಳ್ಳುಹಂದಿ ಜೊತೆಗಿನ ಕಾದಾಟದಲ್ಲಿ ಗಾಯಗೊಂಡು ಚಿರತೆ ಸಾವನ್ನಪ್ಪಿರುವುದು ಮೇಲ್ನೋಟಕ್ಕೆ ದೃಢವಾಗಿದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>